# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 991 |
| ಸದಸ್ಯರ ಹೆಸರು | : | ಶ್ರೀ ಕೆ.ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 21.12.2021 |
| ಉತ್ತರಿಸಬೇಕಾದ ಸಚಿವರು | : | ನಗರಾಭಿವೃದ್ಧಿ ಸಚಿವರು. |

*******

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದ ಪಟ್ಟಣ ಪಂಚಾಯಿತಿಗಳಲ್ಲಿ ಭೂ ಪರಿವರ್ತಿತ ಅನಧಿಕೃತವಾಗಿ ವಿಭಜನೆಯಾಗಿರುವ (Split Converstion) ಜಮೀನುಗಳಿಗೆ ಖಾತೆ ನಿರಾಕರಿಸಲಾಗಿದ್ದ ಪರಭಾರೆ, ಕಟ್ಟಡ ಪರವಾನಗಿ ನೀಡಲು ಸಾಧ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| ಆ. | ದಿನಾಂಕ :08-12-1976ರ ಪೂರ್ವದಲ್ಲಿ ಪರಿವರ್ತಿತ ನಿವೇಶನಗಳಿಗೆ ಕಟ್ಟಡ ಪರವಾನಗಿ ನೀಡಲು ಅವಕಾಶವಿದ್ದು, ಇದನ್ನು ಮುಂದುವರೆಸಿ ಕನಿಷ್ಠ 2015 ರವರೆಗಿನ ಪರಿವರ್ತಿತ ನಿವೇಶನಗಳಿಗೆ ಪರವಾನಗಿ ನೀಡಲು ಕ್ರಮವಹಿಸುವುದೇ? | ಸ್ಥಳೀಯ ಯೋಜನಾ ಪ್ರದೇಶದ ಘೋಷಣೆಯ ಪೂರ್ವದಲ್ಲಿ ಭೂ ಪರಿವರ್ತನೆಗೊಂಡ ಜಮೀನುಗಳಿಗೆ ಸಕ್ಷಮ ಪ್ರಾಧಿಕಾರದಿಂದ ನಿಯಮಾನುಸಾರ ಅನುಮೋದನೆ ಪಡೆದಿರುವ ವಿನ್ಯಾಸಗಳಲ್ಲಿನ ನಿವೇಶನಗಳಿಗೆ ಕಟ್ಟಡ ಪರವಾನಿಗೆ ಸಂಬಂಧ ತಾಂತ್ರಿಕ ಅಭಿಪ್ರಾಯ ನೀಡಲು ಯಾವುದೇ ನಿರ್ಬಂಧವಿರುವುದಿಲ್ಲ.<br><br>ಆದರೆ, ದಿನಾಂಕ 08.12.1976ರಲ್ಲಿ ಕರ್ನಾಟಕ ಪುರ ಸಭೆಗಳ ಕಾಯ್ದೆ 1964ರಲ್ಲಿ ಕಲಂ 387 ಸೇಪರ್ಡೆಗೊಳಿಸಲಾಗಿದ್ದು, ಅದರಂತೆ ನಗರ ಸ್ಥಳೀಯ ಸಂಸ್ಥೆಗಳು ಯೋಜನಾ ಪ್ರಾಧಿಕಾರಗಳನ್ನು ರಚಿಸದೇ ಇರುವ ಪ್ರದೇಶಗಳಲ್ಲಿ ನಗರ ಯೋಜನಾ ವಿಷಯಗಳಿಗೆ ಸಂಬಂಧಿಸಿದಂತೆ ಸಮೀಪದ ಯೋಜನಾ ಪ್ರಾಧಿಕಾರದೊಂದಿಗೆ ಸಮಾಲೋಚಿಸಬೇಕಿರುತ್ತದೆ.<br><br>ದಿನಾಂಕ 08.12.1976ರ ನಂತರ ವಿನ್ಯಾಸ ನಕ್ಷೆ ಅನುಮೋದನೆ ಪಡೆಯದೇ ಅನಧಿಕೃತವಾಗಿ ವಿಭಜಿಸಿ ಸ್ಥಳೀಯ ಸಂಸ್ಥೆಯಲ್ಲಿ ಖಾತೆ ತೆರೆದಿರುವ ನಿವೇಶನಗಳಿಗೆ ಕಟ್ಟಡ ಪರವಾನಿಗೆ ಸಂಬಂಧ ತಾಂತ್ರಿಕ ಅಭಿಪ್ರಾಯ ನೀಡಲು ಅವಕಾಶವಿರುವುದಿಲ್ಲ. ಅದರಂತೆ ದಿ: 04.05.2017ರ ಸುತ್ತೋಲೆಯಲ್ಲಿ ತಾಂತ್ರಿಕ ಅಭಿಪ್ರಾಯ ನೀಡುವ ಕುರಿತು ಅಗತ್ಯ ನಿರ್ದೇಶನ ನೀಡಲಾಗಿರುತ್ತದೆ. |

| | | |
|---|---|---|
| | | ದಿನಾಂಕ:08.12.1976ರಲ್ಲಿ ಕರ್ನಾಟಕ ಪುರಸಭೆಗಳ ಕಾಯ್ದೆ 1964ರಲ್ಲಿ ಕಲಂ 387 ಸೇರ್ಪಡೆಗೊಳಿಸಲಾಗಿದ್ದು, ಅದರಂತೆ ನಗರ ಸ್ಥಳೀಯ ಸಂಸ್ಥೆಗಳು ಯೋಜನಾ ಪ್ರಾಧಿಕಾರಗಳನ್ನು ರಚಿಸದೇ ಇರುವ ಪ್ರದೇಶಗಳಲ್ಲಿ ನಗರ ಯೋಜನಾ ವಿಷಯಗಳಿಗೆ ಸಂಬಂಧಿಸಿದಂತೆ ಸಮೀಪದ ಯೋಜನಾ ಪ್ರಾಧಿಕಾರದೊಂದಿಗೆ ಸಮಾಲೋಚಿಸಬೇಕಾಗಿರುವುದರಿಂದ, ದಿನಾಂಕ:08.12.1976ರ ಪೂರ್ವದಲ್ಲಿ ಭೂ ಪರಿವರ್ತಿತ ನಿವೇಶನಗಳಿಗೆ ಕಟ್ಟಡ ಪರವಾನಗಿ ನೀಡಲು ಅವಕಾಶ ಕಲ್ಪಿಸಲಾಗಿದೆ.<br><br>ಸ್ಥಳೀಯ ಯೋಜನಾ ಪ್ರದೇಶ ಘೋಷಣೆಯಾಗಿ ಮಹಾಯೋಜನೆ ಅನುಮೋದನೆಯಾಗಿರುವ ಪ್ರದೇಶಗಳಲ್ಲಿ ದಿನಾಂಕ:19.10.2013ರ ಮುಂಚಿತವಾಗಿ ಬಂದಿರುವ ಎಲ್ಲಾ ತರಹದ ಅನಧಿಕೃತ ಅಭಿವೃದ್ಧಿಗಳನ್ನು ಸಕ್ರಮಗೊಳಿಸಲು ಸರ್ಕಾರವು ದಿನಾಂಕ:28.05.2014 ರಲ್ಲಿ Karnataka Town and Country Planning (Regularisation of unauthorised Development or Constructions) Rules, 2014 ಅನ್ನು ಜಾರಿಗೆ ತಂದಿರುತ್ತದೆ. ಸದರಿ ನಿಯಮಕ್ಕೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು SLA (C) No(s).956-957/2017 ರಲ್ಲಿ ದಿ:13.07.2017 ರಂದು ಮಧ್ಯಂತರ ತಡೆಯಾಜ್ಞೆಯನ್ನು ಮುಂದಿನ ತೀರ್ಪಿನವರೆಗೂ ಮುಂದುವರೆಸುವಂತೆ ಆದೇಶ ನೀಡಿರುತ್ತದೆ.<br>ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇರುವುದರಿಂಬ, ಯಾವುದೇ ಅನಧಿಕೃತ ಬಡಾವಣೆಗಳನ್ನು ಅಧಿಕೃತವಾಗಿಸಲು ಪ್ರಸ್ತುತ ಅವಕಾಶವಿರುವುದಿಲ್ಲ. ಇತರೆ ನಗರ / ಪಟ್ಟಣಗಳಲ್ಲಿ ಈ ವಿಷಯದ ಬಗ್ಗೆ ಸಮಾಲೋಚಿಸಲು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟದ ಉಪ ಸಮಿತಿ ರಚಿಸಲಾಗಿರುತ್ತದೆ. |

ಸಂಖ್ಯೆ: ನಅಇ 479 ಮೈಅಪ್ರಾ 2021(ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು